All India Radio: Bangalore
National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

29.12.2025 19.35 p.m.

***************

ಮುಖ್ಯಾಂಶಗಳು

- ಮಾನವ ಕಲ್ಯಾಣಕ್ಕಾಗಿ ತಾಂತ್ರಿಕ ಅಭಿವೃದ್ಧಿಯನ್ನು ಬಳಸಬೇಕು: ವಿದ್ಯಾರ್ಥಿಗಳಿಗೆ ರಾಷ್ಟ್ರಪತಿ ಕರೆ
- ಸಶಸ್ತ್ರ ಪಡೆಗಳ ಸಾಮರ್ಥ್ಯಗಳನ್ನು ಹೆಚ್ಚಿಸಲು ೭೯ ಸಾವಿರ ಕೋಟಿ ರೂಪಾಯಿಗಳ ಪ್ರಸ್ತಾವನೆಗಳನ್ನು ಅನುಮೋದಿಸಿದ ರಕ್ಷಣಾ ಸಚಿವಾಲಯ.
- ಅಸ್ಸಾಂ ಸೇರಿದಂತೆ ಈಶಾನ್ಯ ಭಾರತದಲ್ಲಿ ಶಾಂತಿ ಸ್ಥಾಪಿಸಿ ಅಭಿವೃದ್ಧಿ ವೇಗಗೊಳಿಸುವಲ್ಲಿ ಕೇಂದ್ರ ಸರ್ಕಾರ ಯಶಸ್ವಿ: ಸಚಿವ ಅಮಿತ್ ಶಾ
- ಮಹಿಳಾ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್: ತಿರುವನಂತಪುರಂನಲ್ಲಿ ನಾಳೆ ಭಾರತ-ಶ್ರೀಲಂಕಾ ಸೆಣಸು

***************

ದೇಶವು ತ್ಯಾಜ್ಯ ನಿರ್ವಹಣೆ ಮತ್ತು ಸುಸ್ಥಿರತೆಯಂತಹ ಸವಾಲುಗಳನ್ನು ಎದುರಿಸುತ್ತಿದೆ. ಇದಕ್ಕೆ ತಾಂತ್ರಿಕ ಪರಿಣತಿಯ ಜೊತೆಗೆ ಸಾಮಾಜಿಕ ಮತ್ತು ಆರ್ಥಿಕ ದೃಷ್ಟಿಕೋನಗಳು ಬೇಕಾಗುತ್ತವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ಜಮ್ ಶೆಡ್ ಪುರದ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯ ೧೫ ನೇ ಘಟಿಕೋತ್ಸವ ಕಾಯಕ್ರಮದಲ್ಲಿ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ, ಮಾತನಾಡಿದರು.

ಮಾನವ ಕಲ್ಯಾಣಕ್ಕಾಗಿ ತಾಂತ್ರಿಕ ಅಭಿವೃದ್ಧಿಯನ್ನು ಬಳಸುವಂತೆ ರಾಷ್ಟ್ರಪತಿಗಳು ವಿದ್ಯಾರ್ಥಿಗಳನ್ನು ಒತ್ತಾಯಿಸಿದರು. ಶಿಕ್ಷಣ ಸಂಸ್ಥೆಗಳನ್ನು ಶ್ರೇಯಾಂಕಗಳ ಮೂಲಕ ಮಾತ್ರವಲ್ಲದೆ ಸಮಾಜಕ್ಕೆ ಅವುಗಳು ನೀಡಿದ ಕೊಡುಗೆಯ ಮೂಲಕವೂ ಮೌಲ್ಯಮಾಪನ ಮಾಡಬೇಕು. ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಸಮಗ್ರ ಮತ್ತು ಸಮೃದ್ಧ ರಾಷ್ಟ್ರವನ್ನು ನಿರ್ಮಿಸಲು ಬಳಸಬೇಕು ಎಂದು ಅವರು ಒತ್ತಾಯಿಸಿದರು.

***************

ಸಶಸ್ತ್ರ ಪಡೆಗಳ ಸಾಮರ್ಥ್ಯಗಳನ್ನು ಹೆಚ್ಚಿಸಲು, ರಕ್ಷಣಾ ಸ್ವಾಧೀನ ಮಂಡಳಿಯು, ೭೯ ಸಾವಿರ ಕೋಟಿ ರೂಪಾಯಿಗಳ ಪ್ರಸ್ತಾವನೆಗಳನ್ನು ಅನುಮೋದಿಸಿದೆ.

ನವದೆಹಲಿಯಲ್ಲಿಂದು ನಡೆದ ಈ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಮೂರು ಸೇವೆಗಳ ಈ ಪ್ರಸ್ತಾವನೆಗಳಿಗೆ ಅಗತ್ಯತೆಯ ಸ್ವೀಕಾರವನ್ನು ಅನುಮೋದಿಸಿದರು.

ಆರ್ಟಿಲರಿ ರೆಜಿಮೆಂಟ್‌ಗಳಿಗೆ ಲೋಯಿಟರ್ ಮ್ಯೂನಿಷನ್ ಸಿಸ್ಟಮ್, ಕಡಿಮೆ ಮಟ್ಟದ ಹಗುರ ತೂಕದ ರಾಡಾರ್‌ಗಳು, ಪಿನಾಕಾ ಮಲ್ಟಿಪಲ್ ಲಾಂಚ್ ರಾಕೆಟ್ ಸಿಸ್ಟಮ್‌ಗಾಗಿ ದೀರ್ಘ ಶ್ರೇಣಿಯ ಮಾರ್ಗದರ್ಶಿ ರಾಕೆಟ್‌ನ ಮದ್ದುಗುಂಡುಗಳು ಮತ್ತು ಭಾರತೀಯ ಸೇನೆಗಾಗಿ ಸಂಯೋಜಿತ ಡ್ರೋನ್ ಪತ್ತೆ ಹಾಗೂ ಪ್ರತಿಬಂಧಕ ವ್ಯವಸ್ಥೆ ಎಂ.ಕೆ-೨ ಸೇರಿದಂತೆ ವಿವಿಧ ರಕ್ಷಣಾ ವ್ಯವಸ್ಥೆಗಳ ಖರೀದಿಗೆ ಸಲ್ಲಿಸಿದ ಪ್ರಸ್ತಾವನೆಗಳನ್ನು ಅನುಮೋದಿಸಲಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಯುದ್ಧತಂತ್ರದ ಗುರಿಗಳ ನಿಖರವಾದ ದಾಳಿಗೆ ಲೋಯಿಟರ್ ಮ್ಯೂನಿಷನ್ ಅನ್ನು ಬಳಸಲಾಗುತ್ತದೆ, ಆದರೆ ಕಡಿಮೆ ಮಟ್ಟದ ಹಗುರ ತೂಕದ ರಾಡಾರ್‌ಗಳು, ಸಣ್ಣ ಗಾತ್ರದ, ಕಡಿಮೆ ಎತ್ತರದಲ್ಲಿ ಹಾರುವ ಮಾನವರಹಿತ ವೈಮಾನಿಕ ವ್ಯವಸ್ಥೆಗಳನ್ನು ಪತ್ತೆ ಮಾಡಿ ಟ್ರ್ಯಾಕ್ ಮಾಡುತ್ತದೆ.

***************

ಕೃತಕ ಬುದ್ಧಿಮತ್ತೆ, ಯಾಂತ್ರೀಕೃತಗೊಂಡ, ಜೈವಿಕ ತಂತ್ರಜ್ಞಾನ ಮತ್ತು ಡಿಜಿಟಲ್ ಸಂಪರ್ಕವು ಮಾನವ ಜೀವನದ ಪ್ರತಿಯೊಂದು ಅಂಶವನ್ನು ಮರುರೂಪಿಸುತ್ತಿರುವ ಈ ಜಗತ್ತಿನಲ್ಲಿ, ವಿದ್ಯಾವಂತ ವ್ಯಕ್ತಿಗಳು ತಂತ್ರಜ್ಞಾನವನ್ನು ಉತ್ಸಾಹ ಮತ್ತು ನೈತಿಕ ಜಾಗರೂಕತೆಯಿಂದ ಸಂಪರ್ಕಿಸಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ.

ಪಾಂಡಿಚೇರಿ ವಿಶ್ವವಿದ್ಯಾಲಯದ ಕುಲಪತಿಯೂ ಆಗಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ವಿಶ್ವವಿದ್ಯಾಲಯದ ೩೦ನೇ ಘಟಿಕೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಭಾಷಣ ಮಾಡಿದರು.

ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ರ ರಾಯಭಾರಿಗಳಾಗಲು ಮತ್ತು ಅದರ ವಿಚಾರಣೆ, ನಾವೀನ್ಯತೆ ಹಾಗೂ ಅಂತರ್ಗತ ಶ್ರೇಷ್ಠತೆಯ ಮನೋಭಾವವನ್ನು ಮುಂದುವರಿಸುವಂತೆ ಅವರು ಪದವೀಧರರನ್ನು ಒತ್ತಾಯಿಸಿದರು.

ಈ ಸಂದರ್ಭದಲ್ಲಿ, ಉಪರಾಷ್ಟ್ರಪತಿಗಳು ವಿಶ್ವವಿದ್ಯಾಲಯದ ಆವರಣದಲ್ಲಿ ಅಂತರರಾಷ್ಟ್ರೀಯ ಸಮಾವೇಶ ಕೇಂದ್ರ ಮತ್ತು ೧೦೦ ಅಡಿ ಎತ್ತರದ ಧ್ವಜಸ್ತಂಭವನ್ನು ಉದ್ಘಾಟಿಸಿದರು.

***************

ಅರಾವಳಿ ಬೆಟ್ಟಗಳು ಮತ್ತು ಅರಾವಳಿ ಶ್ರೇಣಿಯ ವ್ಯಾಖ್ಯಾನದ ಕುರಿತು ನವೆಂಬರ್ ೨೦ರಂದು ಹೊರಡಿಸಲಾದ ತನ್ನದೇ ಆದ ಆದೇಶವನ್ನು ಸುಪ್ರೀಂ ಕೋರ್ಟ್ ತಡೆಹಿಡಿದಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜೆ.ಕೆ. ಮಹೇಶ್ವರಿ ಮತ್ತು ಎ.ಜಿ. ಮಸಿಹ್ ಅವರನ್ನೊಳಗೊಂಡ ರಜಾ ಪೀಠವು, ಅರಾವಳಿಗಳ ವ್ಯಾಖ್ಯಾನದ ವಿಷಯದಲ್ಲಿ ಪರಿಶೀಲಿಸಬೇಕಾದ ಸಮಸ್ಯೆಗಳನ್ನು ಪರಿಶೀಲಿಸಲು ಹೊಸ ತಜ್ಞರ ಸಮಿತಿಯನ್ನು ರಚಿಸುವಂತೆ ಆದೇಶಿಸಿದೆ.

ಇಂದಿನ ತನ್ನ ತೀರ್ಪಿನಲ್ಲಿ, ಸುಪ್ರೀಂ ಕೋರ್ಟ್, ಈ ಹಿಂದೆ ಅನುಮೋದಿಸಲಾದ ವ್ಯಾಖ್ಯಾನಗಳ ಕುರಿತು ಸ್ಪಷ್ಟೀಕರಣಗಳು ಅಗತ್ಯವಾಗಿವೆ ಮತ್ತು ನವೆಂಬರ್ ೨೦ರಂದು ಸುಪ್ರೀಂ ಕೋರ್ಟ್ ನೀಡಿದ ತೀರ್ಪಿನ ನಿರ್ದೇಶನವನ್ನು ಸ್ಥಗಿತಗೊಳಿಸಲಾಗಿದೆ ಎಂದು ಹೇಳಿದೆ.

***************

ಮುಂದಿನ ವರ್ಷ ಜನವರಿ ೧ ರಿಂದ ಆಸ್ಟ್ರೇಲಿಯಾದ ಸುಂಕಗಳು ಭಾರತೀಯ ರಫ್ತಿಗೆ ಶೇಕಡ ೧೦೦ ರಷ್ಟು ಸುಂಕರಹಿತವಾಗಿರಲಿವೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದು ಹೇಳಿದ್ದಾರೆ.

ಭಾರತ-ಆಸ್ಟ್ರೇಲಿಯಾ ಆರ್ಥಿಕ ಸಹಕಾರ ಮತ್ತು ವ್ಯಾಪಾರ ಒಪ್ಪಂದದ ಮೂರನೇ ವಾರ್ಷಿಕೋತ್ಸವದಂದು ಮಾತನಾಡಿದ ಅವರು, ಇದು ಕಾರ್ಮಿಕ-ತೀವ್ರ ವಲಯಗಳಿಗೆ ಹೊಸ ಅವಕಾಶಗಳನ್ನು ತೆರೆಯುತ್ತದೆ ಎಂದು ಹೇಳಿದರು. ಕಳೆದ ಮೂರು ವರ್ಷಗಳಲ್ಲಿ ಈ ಒಪ್ಪಂದವು, ನಿರಂತರ ರಫ್ತು ಬೆಳವಣಿಗೆ, ಆಳವಾದ ಮಾರುಕಟ್ಟೆ ಪ್ರವೇಶ ಮತ್ತು ಬಲವಾದ ಪೂರೈಕೆ-ಸರಪಳಿ ಸ್ಥಿತಿಸ್ಥಾಪಕತ್ವವನ್ನು ನೀಡಿದೆ ಎಂದು ಅವರು ತಿಳಿಸಿದರು.

***************

೨೦೧೭ ರ ಉನ್ನಾವೋ ಅತ್ಯಾಚಾರ ಪ್ರಕರಣದಲ್ಲಿ ಉಚ್ಚಾಟಿತ ಬಿಜೆಪಿ ನಾಯಕ ಕುಲದೀಪ್ ಸಿಂಗ್ ಸೆಂಗಾರ್ ಅವರ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸಿದ ದೆಹಲಿ ಹೈಕೋರ್ಟ್

ಆದೇಶವನ್ನು ಸುಪ್ರೀಂ ಕೋರ್ಟ್ ಇಂದು ತಡೆಹಿಡಿದಿದೆ, ಇದರಿಂದಾಗಿ ಅವರು ಜೈಲಿನಲ್ಲೇ ಇರುವುದನ್ನು ಖಚಿತಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜೆ.ಕೆ. ಮಹೇಶ್ವರಿ ಮತ್ತು ಎ.ಜಿ. ಮಸಿಹ್ ಅವರನ್ನೊಳಗೊಂಡ ರಜಾ ಪೀಠವು, ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸಿಬಿಐ ಸಲ್ಲಿಸಿದ ಅರ್ಜಿಯ ಕುರಿತು ಪ್ರತಿಕ್ರಿಯೆ ನೀಡುವಂತೆ ಸೆಂಗಾರ್ ಅವರಿಗೆ ನೋಟಿಸ್ ನೀಡಿದೆ. ಸಿಬಿಐ ಪರವಾಗಿ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಹೈಕೋರ್ಟ್ ಆದೇಶವನ್ನು ತಡೆಹಿಡಿಯುವಂತೆ ಪೀಠವನ್ನು ಒತ್ತಾಯಿಸಿದರು.

***************

ಪೋರಬಂದರಿನಿಂದ ಓಮನ್ ಮಸ್ಕತ್ ಗೆ ಭಾರತೀಯ ನೌಕಾ ಹಡಗು  ಐಎನ್‌ಎಸ್‌ವಿ ಕೌಂಡಿನ್ಯಾ ತನ್ನ ಮೊದಲ ಪ್ರಯಾಣ ಆರಂಭಿಸಿದ್ದಕ್ಕೆ ಪ್ರಧಾನಿ ನರೇಂದ್ರ ಮೋದಿ ಇಂದು ಸಂತಸ ವ್ಯಕ್ತಪಡಿಸಿದ್ದಾರೆ.

ಈ ಹಡಗನ್ನು ಪ್ರಾಚೀನ ಭಾರತೀಯ ಹೊಲಿಗೆ-ಹಡಗು ತಂತ್ರಜ್ಞಾನವನ್ನು ಬಳಸಿ ನಿರ್ಮಿಸಲಾಗಿದ್ದು, ಇದು ದೇಶದ ಶ್ರೀಮಂತ ಸಮುದ್ರಯಾನ ಪರಂಪರೆಯನ್ನು ಎತ್ತಿ ಹಿಡಿಯುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ಅವರು ತಿಳಿಸಿದ್ದಾರೆ. ಈ ವಿಶಿಷ್ಟ ಹಡಗನ್ನು ಜೀವಂತಗೊಳಿಸುವಲ್ಲಿ ಸಮರ್ಪಿತ ಪ್ರಯತ್ನಗಳಿಗಾಗಿ ವಿನ್ಯಾಸಕರು, ಕುಶಲಕರ್ಮಿಗಳು, ಹಡಗು ನಿರ್ಮಾಣಗಾರರು ಮತ್ತು ನೌಕಾಪಡೆಯನ್ನು ಪ್ರಧಾನಿ ಅಭಿನಂದಿಸಿದರು.

***************

ಕೇರಳದ ತಿರುವನಂತಪುರಂನಲ್ಲಿರುವ ಗ್ರೀನ್‌ಫೀಲ್ಡ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ೫ನೇ ಮತ್ತು ಅಂತಿಮ ಮಹಿಳಾ ಟಿ-೨೦ ಅಂತಾರಾಷ್ಟ್ರೀಯ ಪಂದ್ಯದಲಿ ಭಾರತ ತಂಡವು ಶ್ರೀಲಂಕಾ ವಿರುದ್ಧ ಸೆಣಸಲಿದೆ. ಈ ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ.

ಹರ್ಮನ್‌ಪ್ರೀತ್ ಕೌರ್ ನೇತೃತ್ವದ ವುಮೆನ್ ಇನ್ ಬ್ಲೂ ತಂಡವು ಈಗಾಗಲೇ ೫ ಪಂದ್ಯಗಳ ಸರಣಿಯನ್ನು ೪-೦ಯ ಮುನ್ನಡೆಯೊಂದಿಗೆ ಕೈವಶ ಮಾಡಿಕೊಂಡಿದೆ.

***************

ಪ್ರಧಾನಮಂತ್ರಿ ನರೇಂದ್ರ ಮೋದಿಯವರು, ತಮ್ಮ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಸೂಕ್ಷ್ಮಜೀವಿ ನಿರೋಧಕ- ಆಂಟಿಮೈಕ್ರೊಬಿಯಲ್ ಪ್ರತಿರೋಧದ ವಿಷಯವನ್ನು ಪ್ರಸ್ತಾಪಿಸಿದ ಹಿನ್ನೆಲೆ, ಅಗತ್ಯವಿದ್ದಾಗ ಮತ್ತು ವೈದ್ಯರು ಶಿಫಾರಸು ಮಾಡಿದಾಗ ಮಾತ್ರ ಪ್ರತಿಜೀವಕಗಳನ್ನು ಬಳಸಬೇಕು ಎಂದು, ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ- ಐಸಿಎಂಆರ್‌ನ ಮಹಾನಿರ್ದೇಶಕ ಡಾ. ರಾಜೀವ್ ಬಹ್ಲ್ ಹೇಳಿದ್ದಾರೆ.

***************

ದೋಹಾದಲ್ಲಿ ನಡೆದ ಈ।ಆಇ ವಿಶ್ವ ರಾಪಿಡ್ ಚೆಸ್ ಚಾಂಪಿಯನ್‌ಶಿಪ್‌ನ ಮುಖ್ಯ ವಿಭಾಗದಲ್ಲಿ ಕಂಚಿನ ಪದಕ ಗೆದ್ದ ಅರ್ಜುನ್ ಎರಿಗೈಸಿ ಮತ್ತು ಕೊನೇರು ಹಂಪಿ ಅವರನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಅಭಿನಂದಿಸಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಅವರು, ಚೆಸ್ ಗ್ರ್ಯಾಂಡ್‌ಮಾಸ್ಟರ್‌ಗಳ ಸ್ಫೂರ್ತಿದಾಯಕ ಆಟ ಹಾಗೂ ಸಮರ್ಪಣಾ ಮನೋಭಾವನೆಗೆ ಶ್ಲಾಘನೆ ವ್ಯಕ್ತಪಡಿಸಿದ್ದು, ಅವರ ಭವಿಷ್ಯದ ಪ್ರಯತ್ನಗಳಿಗೆ ಶುಭ ಹಾರೈಸಿದ್ದಾರೆ.

***************

೧೭ ನೇ ಜೂನಿಯರ್ ರೋಲ್ ಬಾಲ್ ರಾಷ್ಟ್ರೀಯ ಚಾಂಪಿಯನ್‌ಶಿಪ್ ಜಮ್ಮುವಿನ ಮುಲಾನಾ ಆಜಾದ್ ಕ್ರೀಡಾಂಗಣದ ಸ್ಕೇಟಿಂಗ್ ರಿಂಕ್‌ನಲ್ಲಿ ಇಂದಿನಿಂದ ಆರಂಭವಾಗಲಿದೆ.

೨೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ ಸುಮಾರು ೮೦೦ ಆಟಗಾರರು ಮತ್ತು ಅಧಿಕಾರಿಗಳು ಈ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಲಿದ್ದಾರೆ.

ಯುವಕರಲ್ಲಿ ರೋಲ್ ಬಾಲ್ ಕ್ರೀಡೆಯನ್ನು ಉತ್ತೇಜಿಸುವ ಮತ್ತು ಈ ಪ್ರದೇಶದಲ್ಲಿ ಕ್ರೀಡಾ ಸಂಸ್ಕೃತಿಯನ್ನು ಬಲಪಡಿಸುವ ಗುರಿಯನ್ನು ರಾಷ್ಟ್ರೀಯ ಮಟ್ಟದ ಈ ಕ್ರೀಡಾಕೂಟವು ಹೊಂದಿದೆ ಎಂದು ಆಯೋಜಕರು ತಿಳಿಸಿದ್ದಾರೆ.

***************

ವಿಶೇಷ ಪ್ರಕಟಣೆ ೨೦೨೫ನೇ ವರ್ಷದಲ್ಲಿ ನಡೆದ ಪ್ರಮುಖ ಘಟನಾವಳಿಗಳ ಕುರಿತಾದ ವಿಶೇಷ ಕಾರ್ಯಕ್ರಮ - ’ಕಾಲಚಕ್ರ’ ಆಕಾಶವಾಣಿಯಲ್ಲಿ ಪ್ರಸಾರವಾಗಲಿದೆ.

ಬೆಂಗಳೂರು ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗ ಸಿದ್ಧಪಡಿಸಿದ ೪೫ ನಿಮಿಷಗಳ ಈ ಕಾರ್ಯಕ್ರಮವು, ಇದೇ ಬುಧವಾರದಂದು ರಾತ್ರಿ ೯ ಗಂಟೆ ೧೫ ನಿಮಿಷದಿಂದ ೧೦ ಗಂಟೆಯವರೆಗೆ ಪ್ರಸಾರವಾಗಲಿದೆ.

ಈ ವಿಶೇಷ ಕಾರ್ಯಕ್ರಮ, ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಿಂದ ಏಕಕಾಲದಲ್ಲಿ ಮೂಡಿಬರಲಿದೆ.

*******ಮುಕ್ತಾಯ********